ಇ) ಯರಗಟ್ಟಿ ಏತ ನೀರಾವರಿ ಯೋಜನೆಯ ಮೇಲ್ಮಟ್ಟ ಕಾಲುವೆ 26.00 ಕಿಮೀ. ಇದ್ದು ಅದರಲ್ಲಿ 7 ಕಿ.ಮೀ.ನ ಆಯ್ದ ಭಾಗಗಳಲ್ಲಿ ಹಾಗೂ ಕೆಳಮಟ್ಟ ಕಾಲುವೆಯು 23.00 ಕಿ. ಮೀ. ಉದ್ದವಿದ್ದು ಅದರಲ್ಲಿ 1 ಕಿ.ಮೀ.ನ ಆಯ್ದಭಾಗಗಳಲ್ಲಿ ಸೋರುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಪುನರ್ಚೇತನ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ, ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.

ಈ) ಯರಗಟ್ಟಿ ಏತ ನೀರಾವರಿ ಯೋಜನೆಯ ಮುಖ್ಯ ಕಾಲುವೆಗಳು ಗುಡ್ಡದ ತಿರುವಿನಲ್ಲಿ ಹಾಯುತ್ತಿದ್ದು ಇತ್ತೀಚಿನ ವರ್ಷಗಳಲ್ಲಿ ಸೋರುವಿಕೆ ಕಂಡು ಬಂದಿರುವುದರಿಂದ ಸೋರುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಂತ ಹಂತವಾಗಿ ಪುನರ್ಚೇತನ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.

ಇನ್ನುಳಿದ 6 ಏತ ನೀರಾವರಿ ಯೋಜನೆಗಳ ಕಾಲುವೆಗಳಲ್ಲಿ ತುಂಬಿರುವ ಹೂಳು ಮತ್ತು ಬೆಳೆದಿರುವ ಕಂಟಿಗಳನ್ನು ತೆಗೆಸುವುದು ಹಾಗೂ ಅಲ್ಲಲ್ಲಿ ಶಿಥಿಲಗೊಂಡಿರುವ ಲೈನಿಂಗ್‌ಗಳನ್ನು ದುರಸ್ತಿ ಪಡಿಸುವ ನಿಟ್ಟಿನಲ್ಲಿ ಲಭ್ಯವಾಗುವ ಯೋಜನೇತರ ಲೆಕ್ಕಶೀರ್ಷಿಕೆ ಅನುದಾನದಲ್ಲಿ ಹಂತ ಹಂತವಾಗಿ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

5397(6207) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) : ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸವದತ್ತಿ ತಾಲ್ಲೂಕಿನ ಶ್ರೀ ರೇಣುಕಾ ಯಲ್ಲಮ್ಮನ ದೇವಸ್ಥಾನ ಯಲ್ಲಮ್ಮ ಗುಡ್ಡ ಜಾತ್ರೆ ಸಮಯದಲ್ಲಿ ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯ ರಸ್ತೆ, ಸಾರಿಗೆ ಬಸ್ಸುಗಳು ಅಲ್ಲದೆ ಖಾಸಗಿ ವಾಹನಗಳು ಬಹಳಷ್ಟು ಪ್ರಮಾಣದಲ್ಲಿ ಬರುವುದರಿಂದ ಜೋಗುಳ ಭಾಂವಿಯ ಹತ್ತಿರ ವಾಹನ ಸಂಚಾರ 4-5 ಗಂಟೆಗಳು ಸ್ಥಗಿತಗೊಂಡು ಪ್ರಯಾಣಿಕರಿಗೆ ಅನಾನೂಕೂಲವಾಗುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಜೋಗುಳ ಭಾಂವಿ ಹತ್ತಿರ ರಾಜ್ಯ ರಸ್ತೆ ಸಾರಿಗೆ ಬಸ್ಸುಗಳಿಗೆ ಮತ್ತು ಖಾಸಗಿ ವಾಹನಗಳಿಗೆ ವ್ಯವಸ್ಥಿತವಾದ ನಿಲುಗಡೆ ವ್ಯವಸ್ಥೆ ಮಾಡಿ ಸಾರ್ವಜನಿಕರು ಮತ್ತು ಪ್ರಯಾಣಿಕರಿಗೆ ಅನುಕೂಲ ಮಾಡಿ ಕೊಡಲು ಸರಕಾರ ಕ್ರಮ ಕೈಗೊಳ್ಳುವುದೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ) ಬಂದಿದೆ.

ಆ) ಜೋಗುಳ ಭಾಂವಿಯ ಹತ್ತಿರ ರಸ್ತೆಯ ಎಡಗಡೆಗೆ ವಾಹನ ನಿಲುಗಡೆ ವ್ಯವಸ್ಥೆ ಮಾಡಲಾಗಿದೆ. ಭಕ್ತಾಧಿಗಳು ಹೆಚ್ಚಾಗುತ್ತಿರುವುದರಿಂದ ರಸ್ತೆಯ ಎರಡು ಬದಿಗಳಲ್ಲಿ ವಾಹನಗಳನ್ನು ನಿಲ್ಲಿಸಲು ವ್ಯವಸ್ಥೆ ಮಾಡಲಾಗಿದೆ. ಅಲ್ಲದೆ, ಪೊಲೀಸ್ ಇಲಾಖೆಯ ತಾತ್ಕಾಲಿಕ ಶೆಡ್ ಪಕ್ಕದಲ್ಲಿಯೂ ಸಹ ವಾಹನಗಳ ನಿಲುಗಡೆಗೆ ವ್ಯವಸ್ಥೆ ಮಾಡಿ, ಸಾರ್ವಜನಿಕರು ಮತ್ತು ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡಲಾಗಿದೆ.

5398(6208) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) : ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸವದತ್ತಿ ತಾಲ್ಲೂಕಿನ ಕೊರಕೊಪ್ಪ ಗ್ರಾಮದ ಹತ್ತಿರ ಕೆರೆಯ ನಿರ್ಮಾಣ ಕಾಮಗಾರಿಗೆ ಯಾವಾಗ ಮಂಜೂರಾತಿ ನೀಡಲಾಯಿತು;

ಆ) ಈ ಕಾಮಗಾರಿಯ ಅಂದಾಜು ಮೊತ್ತವೆಷ್ಟು;

ಇ) ಕಾಮಗಾರಿ ಕೆಲಸ ಪ್ರಾರಂಭ ಗೊಂಡು ಈಗ ಸ್ಥಗಿತಗೊಂಡಿದ್ದಕ್ಕೆ ಕಾರಣಗಳೇನು;